153ನೇ 6 ನಿ-330- (32) 3008

# ಕರ್ನಾಟಕ ವಿಧಾನ ಪರಿಷತ್ತು

**ಶ್ರೀ ಪುಟ್ಟಣ್ಣ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ನಿಯಮ 330ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಇಲಾಖಾ ಉತ್ತರ:**

**ವಿಷಯ:** ಖಾಸಗಿ ಅನುದಾನಿತ/ಅನುದಾನರಹಿತ ಶಾಲೆಗಳ ಪ್ರಥಮ ಮಾನ್ಯತೆ ಹಾಗೂ ನವೀಕರಣವನ್ನು ಮಾಡುವ ಸಂದರ್ಭದಲ್ಲಿ ಕಟ್ಟಡ ಸುರಕ್ಷತಾ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಮಾಪನ ಪತ್ರ ಪಡೆದಿರಬೇಕೆಂಬ ಷರತ್ತು ವಿಧಿಸಲಾಗಿದೆ. ಸರ್ಕಾರಿ ಶಾಲೆಗಳಿಗೆ ಇಲ್ಲದ ನಿಯಮಗಳನ್ನು ಖಾಸಗಿ ಶಾಲೆಗಳ ಮೇಲೆ ಹೇರುತ್ತಿರುವುದು ಸಮಂಜಸವಲ್ಲ. ಲೋಕೋಪಯೋಗಿ ಇಲಾಖೆ ಈ ರೀತಿಯ ನಿಯಮಗಳಿಂದ ಖಾಸಗಿ ಶಾಲೆಗಳು ಲಕ್ಷಾಂತರ ರೂ.ಗಳನ್ನು ಲಂಚ ನೀಡಿ ತಿಂಗಳುಗಟ್ಟಲೆ ಲೋಕೋಪಯೋಗಿ ಇಲಾಖೆಯ ಕಛೇರಿಗೆ ಅಲೆದಾಡುವ ಪರಿಸ್ಥಿತಿ ಬಂದಿದೆ. ಲೋಕೋಪಯೋಗಿ ಇಲಾಖೆಯವರು ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ನೀಡಲು ವಿಧಿಸಿರುವ ಷರತ್ತುಗಳನ್ನು ಖಾಸಗಿ ಶಾಲೆಗಳವರು ಪೂರೈಸಲು ಸಾಧ್ಯವಾಗುತ್ತಿಲ್ಲ. ಪ್ರತಿ ವರ್ಷ ನವೀಕರಣ ಮಾಡಬೇಕೆಂದು ನಿಗಧಿಗೊಳಿಸಿ ಒಂದು ವರ್ಷಕ್ಕೆ ಮಾತ್ರ ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ನೀಡಲಾಗುತ್ತಿದೆ. ಇದರಿಂದ ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳವರು ಪ್ರತಿ ವರ್ಷ ಲಕ್ಷಾಂತರ ರೂ.ಗಳ ಲಂಚವನ್ನು ಲೋಕೋಪಯೋಗಿ ಇಲಾಖೆಯವರಿಗೆ ನೀಡಬೇಕಾಗಿದೆ. ಆದ್ದರಿಂದ ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ಪಡೆಯಲು ವಿಧಿಸಿರುವ ಷರತ್ತುಗಳನ್ನು ಸಡಿಲಗೊಳಿಸಬೇಕು. ಲೋಕೋಪಯೋಗಿ ಇಲಾಖೆಯು ಸರ್ಕಾರಿ ಆದೇಶದಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು ಕಟ್ಟಡ ಸುರಕ್ಷತಾ ಪ್ರಮಾಣ ಪತ್ರವನ್ನು ನೀಡಬೇಕೆಂದು ಆದೇಶ ಮಾಡಿದ್ದು, ಲೋಕೋಪಯೋಗಿ ಇಲಾಖೆಯ ನಂ.2 ಕಟ್ಟಡಗಳ ವಿಭಾಗ, ಬೆಂಗಳೂರು ಮತ್ತು ಕೆಲವು ಕಛೇರಿಗಳಲ್ಲಿ ಕಾರ್ಯಪಾಲಕ ಅಭಿಯಂತರರೆ ನೀಡುತ್ತಿದ್ದಾರೆ. ಇದರಿಂದ ಈ ವಿಭಾಗದ ಶಾಲೆಗಳಿಗೆ ತುಂಬಾ ತೊಂದರೆಯಾಗುತ್ತಿದೆ. ಉತ್ತಮವಾದ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಸುಸಜ್ಜಿತ ಶಾಲಾ ಕಟ್ಟಡವನ್ನು ಕಟ್ಟಿರುವ ಶಾಲೆಗಳಿಗೆ ಒಂದು ವರ್ಷಕ್ಕೆ ನೀಡುತ್ತಿರುವ ಕಟ್ಟಡ ಸುರಕ್ಷತಾ ಪ್ರಮಾಣ ಪತ್ರವನ್ನು 10 ವರ್ಷ 20 ವರ್ಷಗಳಿಗೊಮ್ಮೆ ಮಾಡಬೇಕು. ಕಟ್ಟಡ ಸುರಕ್ಷತಾ ಪ್ರಮಾಣ ಪತ್ರವನ್ನು ನೀಡಲು ತೊಂದರೆ ನೀಡುತ್ತಿರುವ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳಬೇಕೆಂಬ ವಿಷಯದ ಕುರಿತು.

*****

**ಉತ್ತರ:** ರಾಜ್ಯದ ಖಾಸಗಿ, ಅನುದಾನಿತ, ಅನುದಾನರಹಿತ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಈಗಾಗಲೇ ನಿರ್ಮಾಣಗೊಂಡಿರುವ ಹಳೆ ಕಟ್ಟಡಗಳಿಗೆ Structural Stability ನಿರಾಪೇಕ್ಷಣಾ ಪತ್ರವನ್ನು ನೀಡುವಲ್ಲಿ ಇಲಾಖಾ ಅಧಿಕಾರಿಗಳು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸರ್ಕಾರದ ಸುತ್ತೋಲೆ ಸಂಖ್ಯೆ:ಲೋಇ 59 ಬಿಇಡಿ 2019, ದಿನಾಂಕ:07.05.2022ರಲ್ಲಿ ವಿವರಿಸಲಾಗಿರುತ್ತದೆ (ಪ್ರತಿ **ಅನುಬಂಧ**ದಲ್ಲಿ ನೀಡಲಾಗಿದೆ). ಸದರಿ ಸುತ್ತೋಲೆಯಲ್ಲಿ ವಿಧಿಸಿರುವ ನಿಯಮಗಳು ಅತ್ಯಂತ ಸರಳ ಹಾಗೂ ಕನಿಷ್ಠ ಅವಶ್ಯಕತೆ ಇರುವ ಮಾಹಿತಿಯಾಗಿರುತ್ತದೆ. ಈ ಸುತ್ತೋಲೆಯಲ್ಲಿ ತಿಳಿಸಿರುವಂತೆ ಲೋಕೋಪಯೋಗಿ ಇಲಾಖೆ ಜೊತೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ನಗರಾಭಿವೃದ್ಧಿ ಇಲಾಖೆಗಳ ಕಾರ್ಯಪಾಲಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಅಧಿಕಾರ ಪ್ರತ್ಯಾಯೋಜನೆಗೊಳಿಸಿ ಪ್ರಮಾಣ ಪತ್ರ ವಿತರಿಸುವಂತೆ ತಿಳಿಸಲಾಗಿರುತ್ತದೆ. ಅದರನುಸಾರ ಶಿಕ್ಷಣ ಸಂಸ್ಥೆಗಳ ಕಟ್ಟಡಗಳಿಗೆ ಸಂಬಂದಪಟ್ಟಂತೆ Structural Stability ನಿರಾಪೇಕ್ಷಣಾ ಪತ್ರವನ್ನು ನೀಡುವಂತೆ ಶಿಕ್ಷಣ ಸಂಸ್ಥೆಗಳು ಅರ್ಜಿಗಳನ್ನು ಮೇಲ್ಕಂಡ ಇಂಜಿನಿಯರಿಂಗ್ ವಿಭಾಗಗಳಿಗೆ

ಸಲ್ಲಿಸಬಹುದಾಗಿದೆ ಹಾಗೂ ಶಿಕ್ಷಣ ಸಂಸ್ಥೆಯಿಂದ ಅಥವಾ ಶಿಕ್ಷಣ ಇಲಾಖೆಯಿಂದ ಅರ್ಜಿಗಳು ಸ್ವೀಕೃತವಾದಲ್ಲಿ ಅದನ್ನು ಪರಿಶೀಲಿಸಿ ಪ್ರಮಾಣ ಪತ್ರವನ್ನು ನೀಡುವಂತೆ ಆಯಾ ಇಲಾಖೆಯ ಕಾರ್ಯಪಾಲಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಅಧಿಕಾರ ನೀಡಲಾಗಿರುತ್ತದೆ.

ಸುತ್ತೋಲೆಯಲ್ಲಿನ ನಮೂನೆಯಂತೆ ಖಾಸಗಿ ಸಂಸ್ಥೆಗಳು ಪ್ರಸ್ತಾವನೆಯನ್ನು ಸಲ್ಲಿಸಬೇಕಿದ್ದು, ಪ್ರಸ್ತಾವನೆಯೊಂದಿಗೆ ಪೂರಕವಾದ ದಾಖಲೆಗಳನ್ನು ಸಂಸ್ಥೆಗಳು ಸಲ್ಲಿಸದೇ ಇದ್ದಲ್ಲಿ ಮಾತ್ರ Structural Stability Certificate ವಿತರಣೆಯಲ್ಲಿ ವಿಳಂಬವಾಗುವ ಸಾಧ್ಯತೆ ಇರುತ್ತದೆ. ಪೂರ್ಣ ಪ್ರಸ್ತಾವನೆ ಸಲ್ಲಿಸಿದ ನಂತರ ಸ್ಥಳ ಪರಿಶೀಲನೆ ನಡೆಸಿ ಪ್ರಮಾಣ ಪತ್ರವನ್ನು ನೀಡಲಾಗುತ್ತಿದೆ.

ಸರ್ಕಾರದ ಸುತ್ತೋಲೆಯಲ್ಲಿ ಚಾಲ್ತಿ ಅವಧಿಯ ಬಗ್ಗೆ ಯಾವುದೇ ಪ್ರಸ್ತಾಪ ಇಲ್ಲದಿರುವ ಕಾರಣ ಕಟ್ಟಡಗಳ ಸುರಕ್ಷತೆಯ ದೃಷ್ಟಿಯಿಂದ ಒಂದು ವರ್ಷದ ಅವಧಿಗೆ ಮಿತಿಗೊಳಿಸಿ ಪ್ರಮಾಣ ಪತ್ರ ನೀಡಲಾಗುತ್ತಿದ್ದು, ಚಾಲ್ತಿ ಅವಧಿಯನ್ನು ನಿಗಧಿಪಡಿಸುವ ಬಗ್ಗೆ ಸರ್ಕಾರದಲ್ಲಿ ಪರಿಶೀಲಿಸಲಾಗುತ್ತಿದೆ.

ಹಾಲಿ ಹಂತದಲ್ಲಿ ಕಟ್ಟಡ ಸುರಕ್ಷತಾ ಪ್ರಮಾಣ ಪತ್ರವನ್ನು ನೀಡಲು ತೊಂದರೆ ನೀಡುತ್ತಿರುವ ಲೋಕೋಪಯೋಗಿ ಇಲಾಖೆ ಅಧಿಕಾರಿಗಳ ಬಗ್ಗೆ ಯಾವುದೇ ದೂರು ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ ಹಾಗೂ ಅಂತಹ ಪ್ರಕರಣಗಳು ವರದಿಯಾಗಿರುವುದಿಲ್ಲ.

ಶಿಕ್ಷಣ ಸಂಸ್ಥೆಗಳು ಕಟ್ಟಡಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿರುವುದನ್ನು ಖಾತರಿಪಡಿಸಿಕೊಂಡು, ಕಟ್ಟಡಗಳ ಸ್ಥಿತಿಯನ್ನು ಆಧರಿಸಿ ಹಾಗೂ ಕಟ್ಟಡಗಳ ಸುರಕ್ಷತೆಯ ದೃಷ್ಟಿಯಿಂದ ಪ್ರಮಾಣ ಪತ್ರವನ್ನು ನೀಡಲಾಗುತ್ತಿದೆ.

**ಸಂಖ್ಯೆ: ಲೋಇ 28 ಬಿಎಲ್ ಕ್ಯೂ 2024**

**(ಸತೀಶ ಜಾರಕಿಹೊಳಿ)**
ಲೋಕೋಪಯೋಗಿ ಸಚಿವರು.

## ಕರ್ನಾಟಕ ಸರ್ಕಾರ

ಸಂಖ್ಯೆ: ಲೋಇ 59 ಬಿಇಡಿ 2019

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 07.05.2022

### ಸುತ್ತೋಲೆ

**ವಿಷಯ:** ಖಾಸಗಿ, ಅನುದಾನಿತ, ಅನುದಾನ ರಹಿತ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಈಗಾಗಲೇ ನಿರ್ಮಾಣಗೊಂಡಿರುವ ಹಳೆಯ ಕಟ್ಟಡಗಳಿಗೆ Structural Stability ನಿರಾಪೇಕ್ಷಣಾ ಪ್ರಮಾಣಪತ್ರವನ್ನು ನೀಡುವಲ್ಲಿ ಇಲಾಖಾ ಅಧಿಕಾರಿಗಳು ಕೈಗೊಳ್ಳಬೇಕಾದ ಕ್ರಮಗಳ ಕುರಿತು.

**ಉಲ್ಲೇಖ:**
1. ಸರ್ಕಾರದ ಸುತ್ತೋಲೆ ಸಂಖ್ಯೆ: ಲೋಇ 59 ಬಿಇಡಿ 2019, ದಿ:10.11.2021
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಇಪಿ 43 ಪಿಜಿಸಿ 2022, ದಿನಾಂಕ:31.03.2022
3. ಅಪರ ಮುಖ್ಯ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ:ಇಡಿ 76 ಯುಎನ್ಇ 2022 ದಿನಾಂಕ:25.04.2022

*****

ಖಾಸಗಿ, ಅನುದಾನಿತ, ಅನುದಾನ ರಹಿತ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಈಗಾಗಲೇ ನಿರ್ಮಾಣಗೊಂಡಿರುವ ಹಳೆಯ ಕಟ್ಟಡಗಳಿಗೆ Structural Stability ನಿರಾಪೇಕ್ಷಣಾ ಪ್ರಮಾಣಪತ್ರವನ್ನು ನೀಡುವಲ್ಲಿ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಉಲ್ಲೇಖ (1) ರಲ್ಲಿ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. ಪ್ರಸ್ತುತ ಉಲ್ಲೇಖ (2) ಹಾಗೂ (3) ರ ಪತ್ರಗಳಲ್ಲಿ, ದಿನಾಂಕ:17.03.2022 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ರಾಜ್ಯದಲ್ಲಿನ ಶಾಲಾ-ಕಾಲೇಜುಗಳ ನೋಂದಣಿ ಮತ್ತು ಸುರಕ್ಷತಾ ಪ್ರಮಾಣ ಪತ್ರಗಳನ್ನು ಸರಳೀಕರಿಸುವ ಬಗ್ಗೆ ಸೂಚನೆಗಳನ್ನು ನೀಡಲಾಗಿದ್ದು, ಅದರಂತೆ ಅನುಷ್ಠಾನಗೊಳಿಸಲು ಕ್ರಮವಹಿಸುವಂತೆ ಸೂಚಿಸಿರುವ ಹಿನ್ನಲೆಯಲ್ಲಿ ಉಲ್ಲೇಖ (1) ರಲ್ಲಿ ಹೊರಡಿಸಲಾಗಿರುವ ಸುತ್ತೋಲೆಯನ್ನು ಹಿಂಪಡೆಯಲಾಗಿದೆ.

ಇನ್ನು ಮುಂದೆ ಇಲಾಖೆಯಿಂದ Structural Stability ನಿರಾಪೇಕ್ಷಣಾ ಪ್ರಮಾಣಪತ್ರವನ್ನು ನೀಡುವಲ್ಲಿ ಈ ಕೆಳಕಂಡಂತೆ ಕ್ರಮವಹಿಸುವಂತೆ ಸೂಚಿಸಲಾಗಿದೆ.

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯ ಸಭಾ ನಡವಳಿಯಂತೆ ಲೋಕೋಪಯೋಗಿ ಇಲಾಖೆಯ ಜೊತೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ನಗರಾಭಿವೃದ್ಧಿ

Scanned with CamScanner

Scanned with OKEN Scanne

ಇಲಾಖೆಗಳ ಕಾರ್ಯಕಾರಿ ಅಭಿಯಂತರರುಗಳು / ಸಹಾಯಕ ಕಾರ್ಯಪಾಲಕ ಅಭಿಯಂತರರುಗಳಿಗೆ ಅಧಿಕಾರ ಪ್ರತ್ಯಾಯೋಜನೆಗೊಳಿಸಿ ಪ್ರಮಾಣ ಪತ್ರಗಳನ್ನು ವಿತರಿಸುವಂತೆ ತಿಳಿಸಲಾಗಿದೆ. ಅದರನುಸಾರ ಶಿಕ್ಷಣ ಸಂಸ್ಥೆಗಳ ಕಟ್ಟಡಗಳಿಗೆ ಸಂಬಂಧಪಟ್ಟಂತೆ Structural Stability ನಿರಾಪೇಕ್ಷಣಾ ಪ್ರಮಾಣಪತ್ರವನ್ನು ನೀಡುವಂತೆ ಶಿಕ್ಷಣ ಸಂಸ್ಥೆಗಳು ಅರ್ಜಿಗಳನ್ನು ಮೇಲ್ಕಂಡ ಇಂಜಿನಿಯರಿಂಗ್ ವಿಭಾಗಗಳಿಗೆ ಸಲ್ಲಿಸಬಹುದಾಗಿದೆ ಹಾಗೂ ಶಿಕ್ಷಣ ಸಂಸ್ಥೆಯಿಂದ ಅಥವಾ ಶಿಕ್ಷಣ ಇಲಾಖೆಯಿಂದ ಅರ್ಜಿಗಳು ಸ್ವೀಕೃತವಾದಲ್ಲಿ ಅದನ್ನು ಪರಿಶೀಲಿಸಿ ಪ್ರಮಾಣ ಪತ್ರವನ್ನು ನೀಡಲು ಆಯಾ ಇಲಾಖೆಯ ಕಾರ್ಯಪಾಲಕ ಅಭಿಯಂತರರುಗಳು ಅಥವಾ ಸಹಾಯಕ ಕಾರ್ಯಪಾಲಕ ಅಭಿಯಂತರರುಗಳಿಗೆ ಅಧಿಕಾರ ನೀಡಲಾಗಿದೆ.

[illegible] ಸುರಕ್ಷತೆ ಪ್ರಮಾಣ ಪತ್ರವನ್ನು ವಿತರಿಸಲು ಈ ಕೆಳಕಂಡಂತೆ ಶುಲ್ಕವನ್ನು ನಿಗಧಿಪಡಿಸಲಾಗಿದೆ.

ಅ) ಗ್ರಾಮೀಣ ಪ್ರದೇಶದಲ್ಲಿ ಒಂದು ಶಾಲೆಗೆ – ರೂ.1,000/- }
ಆ) ನಗರ ಪ್ರದೇಶದಲ್ಲಿ ಒಂದು ಶಾಲೆಗೆ – ರೂ.5,000/- } ಖಾಸಗಿ ಮತ್ತು ಅನುದಾನಿತ ಶಾಲೆಗಳಿಗೆ

ಇ) ಸರ್ಕಾರಿ ಶಾಲೆಗಳಿಗೆ ಶುಲ್ಕ ವಿನಾಯಿತಿಯನ್ನು ನೀಡಲಾಗಿದೆ.

3. ಲೋಕೋಪಯೋಗಿ ಇಲಾಖೆಯ ವತಿಯಿಂದ Structural Stability ನಿರಾಪೇಕ್ಷಣಾ ಪ್ರಮಾಣಪತ್ರವನ್ನು ಪಡೆಯಲು ಇಚ್ಛಿಸುವ ಶಿಕ್ಷಣ ಸಂಸ್ಥೆಗಳು ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಅರ್ಜಿಯನ್ನು ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರುಗಳಿಗೆ ಸಲ್ಲಿಸಬಹುದಾಗಿರುತ್ತದೆ.

4. ಅರ್ಜಿಯು ಸ್ವೀಕೃತಗೊಂಡ ನಂತರ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು ಈ ಕೆಳಕಂಡಂತೆ ಪರಿಶೀಲಿಸಿ ನಿರಾಪೇಕ್ಷಣಾ ಪ್ರಮಾಣ ಪತ್ರವನ್ನು ವಿತರಿಸಲು ಸೂಚಿಸಿದೆ.

i. 05 ವರ್ಷಕ್ಕಿಂತ ಮೇಲ್ಪಟ್ಟ ಅವಧಿಯಲ್ಲಿ ನಿರ್ಮಾಣಗೊಂಡ ಕಟ್ಟಡಗಳಿಗೆ ಸಂಬಂಧಪಟ್ಟಂತೆ ಅರ್ಜಿಯು ಸ್ವೀಕೃತವಾದಲ್ಲಿ ಕಟ್ಟಡಕ್ಕೆ ಸಂಬಂಧಪಟ್ಟಂತೆ ಯಾವುದೇ ದಾಖಲಾತಿಗಳನ್ನು ಸಲ್ಲಿಸುವುದು ಕಡ್ಡಾಯವಿರುವುದಿಲ್ಲ. ಈ ಸಂದರ್ಭದಲ್ಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು ಕಡ್ಡಾಯವಾಗಿ ಕನಿಷ್ಟ 02 ರೀತಿಯ Non-destructive test ಗಳನ್ನು ಕೈಗೊಂಡು ಫಲಿತಾಂಶವನ್ನು ಪರಿಶೀಲಿಸಿ ಕಟ್ಟಡದ ಸ್ಥಿತಿಗತಿಯ ಬಗ್ಗೆ ಸೂಕ್ತವಾದ ಷರಾ ಹಾಗೂ ಶಿಫಾರಸ್ಸಿನೊಂದಿಗೆ ಪ್ರಮಾಣ ಪತ್ರವನ್ನು ನೀಡತಕ್ಕದ್ದು.

ii. 05 ವರ್ಷಕ್ಕಿಂತ ಒಳಗಿನ ಅವಧಿಯಲ್ಲಿ ನಿರ್ಮಾಣಗೊಂಡು ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಕಟ್ಟಡಗಳಿಗೆ ಅರ್ಜಿ ನಮೂನೆಯಲ್ಲಿ ತಿಳಿಸಿರುವ ದಾಖಲಾತಿಗಳು ಲಭ್ಯವಿದ್ದಲ್ಲಿ Non-destructive test ಗಳನ್ನು ಕೈಗೊಳ್ಳುವುದು ಕಡ್ಡಾಯವಿರುವುದಿಲ್ಲ. ಇಂತಹ ಸಂದರ್ಭದಲ್ಲಿ ದಾಖಲಾತಿಗಳನ್ನು ಪರಿಶೀಲಿಸಿ ಅವುಗಳ ವಿವರಗಳು ಸಮರ್ಪಕವಾಗಿದ್ದಲ್ಲಿ ಮೇಲ್ನೋಟಕ್ಕೆ ಕಟ್ಟಡದ ಸ್ಥಿತಿಗತಿಯನ್ನು ಕೂಲಂಕುಷವಾಗಿ ಪರಿಶೀಲಿಸಿ ಯಾವುದೇ ಕುಂದು

Scanned with OKEN Scanner

ಕೊರತೆ ಕಂಡು ಬರದೆ ಇದ್ದಲ್ಲಿ, ನಿರಾಪೇಕ್ಷಣಾ ಪ್ರಮಾಣಪತ್ರವನ್ನು ನೀಡಬಹುದಾಗಿದೆ. ಒಂದು ವೇಳೆ ಸದರಿ ಅವಧಿಯ ಕಟ್ಟಡಕ್ಕೆ ಯಾವುದೇ ದಾಖಲಾತಿಗಳು ಲಭ್ಯವಿಲ್ಲದೇ ಇದ್ದಲ್ಲಿ ಅಥವಾ ಒದಗಿಸಲಾದ ದಾಖಲಾತಿಗಳ ವಿವರಗಳು ಸಮರ್ಪಕವಾಗಿಲ್ಲದೆ ಇರುವುದು ಕಂಡುಬಂದಲ್ಲಿ ಅಥವಾ ಮೇಲ್ನೋಟದಲ್ಲಿ ಕಟ್ಟಡದ ಸ್ಥಿತಿಗತಿಯನ್ನು ಪರಿಶೀಲಿಸಿದಾಗ ಕುಂದುಕೊರತೆಗಳು ಕಂಡುಬಂದಂತಹ ಸಂದರ್ಭಗಳಲ್ಲಿ ಕನಿಷ್ಠ 02 ರೀತಿಯ Non-destructive test ಗಳನ್ನು ಕೈಗೊಂಡು ಫಲಿತಾಂಶವನ್ನು ಪರಿಶೀಲಿಸಿ ಕಟ್ಟಡದ ಸ್ಥಿತಿಗತಿಯ ಬಗ್ಗೆ ಸೂಕ್ತವಾದ ಷರಾ ಹಾಗೂ ಶಿಫಾರಸ್ಸಿನೊಂದಿಗೆ ಪ್ರಮಾಣ ಪತ್ರವನ್ನು ನೀಡತಕ್ಕದ್ದು.

iii. ಮೇಲ್ಕಂಡ ಎರಡೂ ಸಂದರ್ಭಗಳಲ್ಲಿ ಶಿಫಾರಸ್ಸು ಪತ್ರ ನೀಡುವಾಗ ಮೇಲ್ನೋಟದ ಪರೀಕ್ಷೆ ಅಥವಾ Non Destructive Test ಗಳ ಫಲಿತಾಂಶವು ತೃಪ್ತಿಕರವಾಗಿದ್ದು ಕಟ್ಟಡದ ದೃಢತ್ವಕ್ಕೆ ಹಾನಿಯಾಗದ ಕನಿಷ್ಠ ದುರಸ್ಥಿ / ರಿಪೇರಿಗಳ ಅವಶ್ಯಕತೆ ಮಾತ್ರ ಕಂಡು ಬಂದು ಕಟ್ಟಡವು ಸುಸ್ಥಿತಿಯಲ್ಲಿದ್ದಲ್ಲಿ ಮಾತ್ರ ನಿರಾಪೇಕ್ಷಣಾ ಪ್ರಮಾಣಪತ್ರ ನೀಡತಕ್ಕದ್ದು ಹಾಗೂ ದುರಸ್ಥಿ / ರಿಪೇರಿಗಳನ್ನು ಕೈಗೊಳ್ಳುವ ಬಗ್ಗೆ ಸೂಕ್ತ ಶಿಫಾರಸ್ಸುಗಳನ್ನು ಮಾಡುವುದು.

iv. ಹೊಸದಾಗಿ ನಿರ್ಮಾಣಗೊಂಡ ಕಟ್ಟಡಗಳಿಗೆ Structural Stability ನಿರಾಪೇಕ್ಷಣಾ ಪ್ರಮಾಣಪತ್ರವನ್ನು ನೀಡುವಾಗ ಅರ್ಜಿ ನಮೂನೆಯಲ್ಲಿ ತಿಳಿಸಿರುವ ಪ್ರಮಾಣಪತ್ರಗಳನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ. ಈ ಪ್ರಮಾಣಪತ್ರಗಳ ವಿವರಗಳಂತೆ ಕಟ್ಟಡ ನಿರ್ಮಾಣ ಕೈಗೊಂಡಿರುವ ಬಗ್ಗೆ ಮೇಲ್ನೋಟಕ್ಕೆ ಪರಿಶೀಲಿಸಿ ಯಾವುದೇ ವೀಕ್ಷಣೆಗಳನ್ನು ಗಮನಿಸಿದಲ್ಲಿ ಅದನ್ನು ಷರಾದಲ್ಲಿ ಸೂಕ್ತವಾಗಿ ತಿಳಿಸಿ ಕಟ್ಟಡದ ದೃಢತ್ವಕ್ಕೆ ಹಾನಿ ಇಲ್ಲದೇ ಇರುವುದು ಕಂಡು ಬಂದಲ್ಲಿ ಮಾತ್ರ ನಿರಾಪೇಕ್ಷಣಾ ಪ್ರಮಾಣಪತ್ರವನ್ನು ನೀಡತಕ್ಕದ್ದು.

v. Non Destructive Test ಗಳನ್ನು ಲೋಕೋಪಯೋಗಿ ಇಲಾಖೆಯ ಗುಣ ನಿಯಂತ್ರಣ ವಲಯ ವ್ಯಾಪ್ತಿಯ ಅಧಿಕಾರಿಗಳಿಂದ ಅಥವಾ NABL Accredited Lab ಅಥವಾ Reputed Engineering Colleges & Institutions ಮುಖಾಂತರ ಕೈಗೊಳ್ಳತಕ್ಕದ್ದು. ಈ ಪರೀಕ್ಷೆಗಳಿಗೆ ತಗಲುವ ಖರ್ಚು ವೆಚ್ಚಗಳನ್ನು ಭರಿಸುವುದು ಶಿಕ್ಷಣ ಸಂಸ್ಥೆಯದ್ದಾಗಿರುತ್ತದೆ.

(ಕೆ. ಶಾಂತಕುಮಾರ) 7/5/2022
ಸರ್ಕಾರದ ಅಪರ ಕಾರ್ಯದರ್ಶಿ,
ಲೋಕೋಪಯೋಗಿ ಇಲಾಖೆ.

ಇವರಿಗೆ:

1. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
2. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಉತ್ತರ), ಧಾರವಾಡ.
3. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಕೇಂದ್ರ), ಶಿವಮೊಗ್ಗ.

Scanned with OKEN Scanner

4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಈಶಾನ್ಯ), ಕಲಬುರಗಿ.
5. ಮುಖ್ಯ ವಾಸ್ತು ಶಿಲ್ಪಿಗಳು, ಕೆ.ಆರ್. ವೃತ್ತ, ಬೆಂಗಳೂರು.
6. ಎಲ್ಲಾ ವೃತ್ತಗಳ ಅಧೀಕ್ಷಕ ಇಂಜಿನಿಯರ್‌ಗಳು, ಲೋಕೋಪಯೋಗಿ ಇಲಾಖೆ.
7. ಎಲ್ಲಾ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್ ಗಳು / ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಗಳು, ಲೋಕೋಪಯೋಗಿ ಇಲಾಖೆ.
8. ಶಾಖಾ ರಕ್ಷಕ ಕಡತ.

ಪ್ರತಿ ಮಾಹಿತಿಗಾಗಿ:

1. ಲೋಕೋಪಯೋಗಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.

Scanned with OKEN Scanner